ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ : 22ನೇ ಜುಲೈ, 2019

ಕುಣಬಿ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

438 (648) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯ ದಟ್ಟಕಾಡುಗಳಲ್ಲಿ ವಾಸಿಸುವ ಕುಣಬಿ ಜನಾಂಗ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತ್ಯಂತ ಹಿಂದುಳಿದವರಾಗಿದ್ದು, ಬುಡಕಟ್ಟು ಸಂಸ್ಕೃತಿಯ ಎಲ್ಲಾ ಗುಣ ಲಕ್ಷಣಗಳನ್ನು ಹೊಂದಿದ್ದು, ಹಲವಾರು ವರ್ಷಗಳಿಂದ ಕುಣಬಿ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಒತ್ತಾಯಿಸುತ್ತಾ, ಬಂದರೂ ಯಾವುದೇ ಪ್ರಯೋಜನವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಇವರನ್ನು ಯಾವ ಕಾರಣಕ್ಕಾಗಿ ಇಲ್ಲಿಯವರೆಗೆ ಪರಿಶಿಷ್ಟ ಪಂಗಡಕ್ಕೆ ಸೇರಿಸಿರುವುದಿಲ್ಲ ; ಈ ಕುರಿತು ಸರ್ಕಾರಕ್ಕೆ ಅನೇಕ ಭಾರಿ ವಿನಂತಿಸಿದ್ದು, ಸದರಿ ವಿಷಯದಲ್ಲಿ ಕುಲಪತಿಗಳಿಂದ ಅಧ್ಯಯನ ನಡೆಸಿ ವರದಿ ಪಡೆಯುವುದಾಗಿ ತಿಳಿಸಿದ್ದು, ಇಲ್ಲಿಯವರೆಗೆ ಯಾವುದೇ ರೀತಿಯಲ್ಲಿ ಕ್ರಮಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?